ಏಳು ಬಜೆಟ್ ಮಂಡಿಸಿದ್ದೇನೆ. I have not seen this type of figure. ಈ ತರಹ ಯಾವುದೂ ಆಗಲಿಕ್ಕೆ ಸಾಧ್ಯವೇ ಇಲ್ಲ. ಯಾವ ರಿಸರ್ವ್ ಬ್ಯಾಂಕ್ ಅಲ್ಲ. ಏನೂ ಅಲ್ಲ. ಇವರು figures ಅನ್ನು inflate ಮಾಡಿದ್ದಾರೆ. These are all inflated figures. ಆ ಕಾರಣದಿಂದ ಇವತ್ತು ಈ ರಾಜ್ಯವನ್ನು ಇವರು ಆರ್ಥಿಕವಾಗಿ ದಿವಾಳಿಯತ್ತ ತೆಗೆದುಕೊಂಡು ಹೋಗುವಂಥ ಪರಿಸ್ಥಿತಿ ನಿರ್ಮಾಣ ಮಾಡಿದ್ದಾರೆ. The very fact that ಬಡವರಿಗೆ ಕೊಡುವ old-age pension, ವಿಧವಾ ವೇತನಕ್ಕೆ, ಬರಗಾಲಕ್ಕೆ ಇವರ ಕೈಯಲ್ಲಿ ದುಡ್ಡು ಕೊಡುವುದಕ್ಕೆ ಆಗುವುದಿಲ್ಲ ಎಂದ ಮೇಲೆ ಅಕ್ಕಿಗೆ, ಮನೆಗಳಿಗೆ ದುಡ್ಡುಕೊಡುವುದಕ್ಕೆ ಆಗುವುದಿಲ್ಲ ಎಂದ ಮೇಲೆ ಈ Government ಅಭಿವೃದ್ಧಿ ಮಾಡಿದ್ದೇನೆ ನಾನು rosy picture ಕೊಟ್ಟುಬಿಟ್ಟಿದ್ದೇನೆ, ಈ ರಾಜ್ಯ ಸಮೃದ್ಧವಾಗಿದೆ ಎನ್ನುವುದು ಸತ್ಯಕ್ಕೆ ದೂರವಾದಂಥ ಮಾತು. ಇದನ್ನು ನಂಬಲಿಕ್ಕೆ ಸಾಧ್ಯವಿಲ್ಲ. ಆದ್ದರಿಂದ ಇವರು ಈ ರಾಜ್ಯವನ್ನು ಹಿಂದಕ್ಕೆ ತೆಗೆದುಕೊಂಡು ಹೋಗುತ್ತಿದ್ದಾರೆ. ಇವರು ಮುಂದಕ್ಕೆ ತೆಗೆದುಕೊಂಡು ಹೋಗುತ್ತಿಲ್ಲ. ಆದ್ದರಿಂದ ನಾವು ಇದನ್ನು ತೀವ್ರವಾಗಿ ಪ್ರತಿಭಟನೆ ಮಾಡಿ walk out ಮಾಡುತ್ತೇವೆ. ಏಕೆಂದರೆ, ಈ ರಾಜ್ಯದ ಜನತೆಗೆ ಇವರು ಸತ್ಯ ಹೇಳುವುದರಲ್ಲಿ ವಿಫಲರಾಗಿದ್ದಾರೆ. ಅಸತ್ಯವನ್ನು ಬಿಟ್ಟು ಸತ್ಯವನ್ನು ಮುಚ್ಚಿಟ್ಟಿದ್ದಾರೆ.

(ಗೊಂದಲ)

(ಈ ಹಂತದಲ್ಲಿ ಕಾಂಗ್ರೆಸ್ ಪಕ್ಷದ ಸದಸ್ಯರು ಸಭಾತ್ಯಾಗ ಮಾಡಿದರು)

(ಗೊಂದಲ)

ಶ್ರೀ ಹೆಚ್.ಡಿ. ರೇವಣ್ಣ : – ಮಾನ್ಯ ಸಭಾಧ್ಯಕ್ಷರೆ,

(ಗೊಂದಲ)

ಅಧ್ಯಕ್ಷರು : – ಮತ್ತೆ ಮತ್ತೆ ಏನು clarification? Please ಕುಳಿತುಕೊಳ್ಳಿ.

ಶ್ರೀ ಹೆಚ್.ಡಿ. ರೇವಣ್ಣ : – Old-age pension, widow pension ಬಗ್ಗೆ ಹೇಳಲಿಲ್ಲ. ನಮ್ಮ ವಿಚಾರಗಳಿಗೆ ಸನ್ಮಾನ್ಯ ಮುಖ್ಯಮಂತ್ರಿಗಳು ಉತ್ತರ ಹೇಳಲಿಲ್ಲ.

(ಗೊಂದಲ)

ಅಧ್ಯಕ್ಷರು : – ನೀವು walk out ಮಾಡುತ್ತೀರಾ?

ಶ್ರೀ ಹೆಚ್.ಡಿ. ರೇವಣ್ಣ : – ಇದು ದಿವಾಳಿಯಾಗಿರುವ ಸರ್ಕಾರ. ಆದ್ದರಿಂದ ನಾವು ಇದನ್ನು ವಿರೋಧಿಸಿ walk out ಮಾಡುತ್ತೇವೆ.

(ಈ ಹಂತದಲ್ಲಿ ಜೆಡಿಎಸ್ ಸದಸ್ಯರು ಸಭಾತ್ಯಾಗ ಮಾಡಿದರು)

ಶ್ರೀ ಡಿ.ವಿ. ಸದಾನಂದಗೌಡ (ಮುಖ್ಯಮಂತ್ರಿಗಳು) : – ಮಾನ್ಯ ಸಭಾಧ್ಯಕ್ಷರೆ, ದಿನಾಂಕ 31.03.2013 ರಂದು, ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1 ರಿಂದ 28ಕ್ಕೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಹಾಗೂ ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲಗನ್ನು ಸೇರಿ ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿದ ಮೊಬಲಗಿಗೆ ಮೀರಿದ ಮೊತ್ತವನ್ನು ಲೇಖಾನುದಾನವಾಗಿ ಈ ಸಭೆಯು ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : – ಮಾನ್ಯ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು ಮಂಡಿಸಿರುವ ಅನುದಾನ ಬೇಡಿಕೆಗಳ (ಲೇಖಾನುದಾನ) ಪ್ರಸ್ತಾವವನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವವು ಹೀಗಿದೆ.

ದಿನಾಂಕ 31.03.2013 ರಂದು, ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1 ರಿಂದ 28ಕ್ಕೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಹಾಗೂ ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲಗನ್ನು ಸೇರಿ ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿದ ಮೊಬಲಗಿಗೆ ಮೀರಿದ ಮೊತ್ತವನ್ನು ಈ ಸಭೆಯು ಲೇಖಾನುದಾನವಾಗಿ ಮಂಜೂರು ಮಾಡುತ್ತದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕೃತವಾಗಿದೆ.